ಕರ್ನಾಟಕ ಸರ್ಕಾರ

ಜನವರಿ 28, 2017

# ವೀರ ಯೋಧ ಸಂದೀಪ್ ಶೆಟ್ಟಿ ಅವರ ನಿಧನಕ್ಕೆ ಮುಖ್ಯಮಂತ್ರಿ ಕಂಬನಿ

**ಬೆಂಗಳೂರು, ಜನವರಿ 28:**

ಹಾಸನ ಜಿಲ್ಲೆಯ ಶಾಂತಿಗ್ರಾಮ ಹೋಬಳಿಯ ದೇವಿಹಳ್ಳಿ ಗ್ರಾಮದ ವೀರಯೋಧ ಸಂದೀಪ್ ಶೆಟ್ಟಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಂಬನಿ ಮಿಡಿದಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಸೋನಾ ಮಾರ್ಗ್ ಸೇನಾ ಕ್ಯಾಂಪ್‌ನಲ್ಲಿ ಸಂಭವಿಸಿದ ಹಿಮಪಾತಕ್ಕೆ ಬಲಿಯಾದ ಸಂದೀಪ್ ಅವರು ದೇಶದ ಬಗ್ಗೆ ಅಪಾರ ಪ್ರೀತಿ ಇರಿಸಿಕೊಂಡಿದ್ದರು ಎಂಬ ವಿಷಯವು ನನ್ನಲ್ಲಿ ಸಂದೀಪ್ ಕುರಿತಂತೆ ಅತ್ಯಂತ ಅಭಿಮಾನ ಹಾಗೂ ಹೆಮ್ಮೆಯನ್ನು ಮೂಡಿಸಿದೆ. ತಾಯ್ನಾಡಿನ ರಕ್ಷಣೆಗೆ ಗಡಿಯಲ್ಲಿ ನಿಂತ ಯೋಧರಿಗೆ ಹವಾಮಾನ ವೈಪರೀತ್ಯಗಳೂ ಕೂಡಾ ಶತ್ರುಗಳಾಗಿ ಪರಿಣಮಿಸುತ್ತಿರುವುದು ಅತ್ಯಂತ ದುಃಖ ಹಾಗೂ ನೋವನ್ನು ಉಂಟು ಮಾಡುವ ಸಂಗತಿಯಾಗಿದೆ. *ಸಂದೀಪ್ ಅವರ ಕುಟುಂಬದವರ ದುಃಖದಲ್ಲಿ ನಾನೂ ಭಾಗಿಯಾಗಿರುವ ಈ ಸಂದರ್ಭದಲ್ಲಿ ಏನನ್ನು ಹೇಳಲೂ ನನ್ನಲ್ಲಿ ಮಾತುಗಳು ಹೊರಡುತ್ತಿಲ್ಲ* ಎಂದು ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಸಂದೀಪ್ ಶೆಟ್ಟಿ ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ. ಅವರ ಅಗಲಿಕೆಯಿಂದ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ತಂದೆ–ತಾಯಿಗೆ ಹಾಗೂ ಬಂಧು–ಮಿತ್ರರಿಗೆ ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

*****************

ಡಿ ಪಿ ಎಂ